**ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿಯವರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರವರ ನಡವಳಿಗಳು**

**ವಿಷಯ:** 2024ರ ಹೊಸ ವರ್ಷಾಚರಣೆ ಸಂಬಂಧ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳಿಗೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂದಿಸುವ ಸಂಬಂಧ ನಿಷೇದಾಜ್ಞೆ ಜಾರಿ ಮಾಡುವ ಬಗ್ಗೆ

**ಉಲ್ಲೇಖ:** ಪೊಲೀಸ್ ಅಧೀಕ್ಷಕರು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರ ಪತ್ರ ಸಂಖ್ಯೆ:ಎಸ್ ಬಿ/ಬಿಡಿ/845/2023, ದಿನಾಂಕ:28.12.2023

**ಪ್ರಸ್ತಾವನೆ**

ಹೊಸ ವರ್ಷಾಚರಣೆ-2024ರ ಸಂಬಂಧ ಮುಂಜಾಗ್ರತ ಕ್ರಮವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರವಾಸಿ ತಾಣಗಳಾದ ಶಿವಗಂಗೆ ಬೆಟ್ಟ, ಸಿದ್ದರಬೆಟ್ಟ, ಮಾಕಳಿದುರ್ಗ, ಆವತಿ ಬೆಟ್ಟ ಮತ್ತು ನಂದಿಬೆಟ್ಟದ ತಪ್ಪಲು ಪ್ರದೇಶಗಳಿಗೆ ದಿನಾಂಕ:30.12.2023 ರಿಂದ 01.01.2024ರವರೆಗೆ ಒಟ್ಟು 03 ದಿನಗಳ ಕಾಲ ಸಾರ್ವಜನಿಕರು ಹೆಚ್ಚಾಗಿ ತೆರಳಿ ಮೋಜು ಮಸ್ತಿ ನಡೆಸಿ ಕಾನೂನು ಸುವ್ಯವಸ್ಥೆಗೆ ಭಂಗ ತರುವ ಸಾಧ್ಯತೆಗಳಿರುತ್ತದೆ. ಈ ಹಿನ್ನಲೆಯಲ್ಲಿ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲು ಆದೇಶ ಹೊರಡಿಸಲು ಪೊಲೀಸ್ ಅಧೀಕ್ಷಕರು, ಬೆಂಗಳೂರು ಜಿಲ್ಲೆ ರವರು ಉಲ್ಲೇಖಿತ ಪತ್ರದನ್ವಯ ಕೋರಿರುತ್ತಾರೆ.

ಉಲ್ಲೇಖಿತ ಪತ್ರದ ಕೋರಿಕೆಯನ್ನು ಪರಿಗಣಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರವಾಸಿ ತಾಣಗಳಾದ ಶಿವಗಂಗೆ ಬೆಟ್ಟ, ಸಿದ್ದರಬೆಟ್ಟ, ಮಾಕಳಿದುರ್ಗ, ಆವತಿ ಬೆಟ್ಟ ಮತ್ತು ನಂದಿಬೆಟ್ಟದ ತಪ್ಪಲು ಪ್ರದೇಶಗಳಿಗೆ ಸಾರ್ವಜನಿಕರ ಪ್ರವೇಶವನ್ನು ನಿಷೇಧಿಸುವುದು ಸೂಕ್ತವೆಂದು ಮನಗಂಡು ಈ ಕೆಳಕಂಡಂತೆ ಆದೇಶಿಸಿರುತ್ತೇನೆ.

## ಆದೇಶ

**ಸಂ:ಎಂ.ಎ.ಜಿ(1)/ಸಿಆರ್/101 /2023-24** **ದಿನಾಂಕ:29.12.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಹೊಸ ವರ್ಷಾಚರಣೆ-2024ರ ಸಂಬಂಧ ಮುಂಜಾಗೃತ ಕ್ರಮವಾಗಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ **ಡಾ.ಎನ್.ಶಿವಶಂಕರ.ಭಾ.ಆ.ಸೇ. ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಆದ ನಾನು ಸಿ.ಆರ್.ಪಿ.ಸಿ 1973, ಕಲಂ 144(1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ** ದಿನಾಂಕ:30.12.2023ರಂದು ಸಂಜೆ 6.00 ಗಂಟೆಯಿಂದ ದಿನಾಂಕ:01.01.2024ರ ಮಧ್ಯರಾತ್ರಿ 12 ಗಂಟೆಯವರೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರವಾಸಿ ತಾಣಗಳಾದ ಶಿವಗಂಗೆ ಬೆಟ್ಟ, ಸಿದ್ದರಬೆಟ್ಟ, ಮಾಕಳಿದುರ್ಗ, ಆವತಿ ಬೆಟ್ಟ ಮತ್ತು ನಂದಿಬೆಟ್ಟದ ತಪ್ಪಲು ಪ್ರದೇಶಗಳಿಗೆ ಸಾರ್ವಜನಿಕರ ಪ್ರವೇಶವನ್ನು ನಿಷೇಧಿಸಿ ಆದೇಶಿಸಿದೆ.

ಈ ಆದೇಶವನ್ನು ದಿನಾಂಕ:29.12.2023ರಂದು ನನ್ನ ಸ್ವಹಸ್ತಾಕ್ಷರದಿಂದ ಮತ್ತು ಮೊಹರಿನೊಂದಿಗೆ ಹೊರಡಿಸಲಾಗಿದೆ.

29/12

**(ಡಾ. ಎನ್.ಶಿವಶಂಕರ. ಭಾ.ಆ.ಸೇ. )**
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ
ಬೆಂಗಳೂರು ಗ್ರಾಮಾಂತರ ಜಿಲ್ಲೆ

Scanned with CamScanner